ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಸಹಕಾರ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ    ದಿನಾಂಕ : DATE 25/5/2020

ಕ್ರಮಕ್ಕೆ ಮುಂದಾದ ಸಚಿವ ಸೋಮಶೇಖರ್ । ಸಿಎಂ ಸಹಮತ

# ಸಹಕಾರ ಇಲಾಖೇಲಿ ಘರ್‌ವಾಪ್ಸಿ

25-5-2020

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಸಹಕಾರ ಇಲಾಖೆಯಲ್ಲಿ ಈಗ ಮರಳಿ ಮಾತೃಸಂಸ್ಥೆಗೆ ತನ್ನ ಸಿಬ್ಬಂದಿ ಎಂಬ ನಿಟ್ಟಿನಲ್ಲಿ ಸಚಿವರು ಕ್ರಮಕ್ಕೆ ಮುಂದಾಗಿದ್ದು, ಅದಕ್ಕೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಕೂಡ ಸಹಮತ ವ್ಯಕ್ತಪಡಿಸಿದ್ದಾರೆ.

ಈ ಮೊದಲು ಸಹಕಾರ ಇಲಾಖೆ ಹಾಗೂ ಲೆಕ್ಕ ಪರಿಶೋಧನೆ ಇಲಾಖೆಗೆಂದು ನೇಮಿಸಿಕೊಳ್ಳಲಾಗಿದ್ದರೂ, ಇಲ್ಲಿ ಹೆಚ್ಚಿನ ಕಾರ್ಯದೊತ್ತಡ ಇಲ್ಲದ್ದರಿಂದ ಬೇರೆ ಇಲಾಖೆಗಳಿಗೆ ಹಲವರು ನಿಯೋಜನೆ ಮಾಡಿಸಿಕೊಂಡು ಹೋಗುತ್ತಿದ್ದರು. ಹೀಗೆ ಹೋದವರು ಅಲ್ಲೇ ಬಹಳಷ್ಟು ವರ್ಷಗಳಿಂದ ಆಯಕಟ್ಟಿನ ಜಾಗದಲ್ಲಿ ನೆಲೆಯೂರಿದ್ದಾರೆ. ಇದರಿಂದ ಇಲಾಖೆಯಲ್ಲಿ ಲೆಕ್ಕಕ್ಕೆ ಹುದ್ದೆಗಳು ಭರ್ತಿಯಾಗಿದ್ದರೂ ಕೆಲಸಕ್ಕೆ ಸಿಬ್ಬಂದಿ ಇಲ್ಲದಂತಾಗಿದೆ.

**ಕೆಲಸ ಹೆಚ್ಚು:** ಸಹಕಾರ ಇಲಾಖೆ ಈಗ ಹಿಂದೆಂದಿಗಿಂತಲೂ ಚುರುಕಾಗಿ ಕಾರ್ಯನಿರ್ವಹಿಸುತ್ತಿದ್ದು, ಕೆಲಸಕ್ಕೆ ಸಿಬ್ಬಂದಿ ಸಾಲುತ್ತಿಲ್ಲ. ಹಲವು ಬ್ಯಾಂಕ್‌ಗಳಲ್ಲಿ ಸಾಲ ವಸೂಲಾತಿ ಸಮಸ್ಯೆ ಆಗುತ್ತಿದೆ. ಜತೆಗೆ ಸಮಯಕ್ಕೆ ಸರಿಯಾಗಿ ಕೆಲಸ ಪೂರ್ತಿಗೊಳಿಸಲು ಸಾಧ್ಯವಾಗುತ್ತಿಲ್ಲ. ಹೀಗಾಗಿ ನಿಗದಿತ ಗುರಿಮುಟ್ಟಲೂ ಸಮಸ್ಯೆಯಾಗುತ್ತಿದೆ. ಸಚಿವ ಎಸ್.ಟಿ. ಸೋಮಶೇಖರ್ ಇಲಾಖೆಯ ಉನ್ನತ ಅಧಿಕಾರಿಗಳ ಸಭೆ ನಡೆಸುವಾಗ ಈ ವಿಷಯ ಗಮನಕ್ಕೆ ಬಂದಿದೆ. ಇದರಿಂದ ಅಸಮಾಧಾನಗೊಂಡ ಸಚಿವರು ಹೀಗೆ ಯಾವ್ಯಾವ ಕಡೆ ಇಲಾಖೆಯ ಎಷ್ಟೆಷ್ಟು ಸಿಬ್ಬಂದಿ ಕಾರ್ಯನಿರ್ವಹಿಸುತ್ತಿದ್ದಾರೆ? ಇಲಾಖೆಯಲ್ಲಿ ಎಲ್ಲೆಲ್ಲಿ ಯಾವ ಯಾವ ಹುದ್ದೆಗಳಿಗೆ ಅತಿ ಅವಶ್ಯಕತೆ ಇದೆ? ಎಂಬ ಬಗ್ಗೆ ತಕ್ಷಣ ವರದಿ ಸಲ್ಲಿಸಬೇಕು ಎಂದು ಉನ್ನತ ಅಧಿಕಾರಿಗಳಿಗೆ ಸೂಚಿಸಿದ್ದರು.



ನಮ್ಮ ಇಲಾಖೆಯಲ್ಲೇ ಸಾಕಷ್ಟು ಕೆಲಸಗಳು ಬಾಕಿ ಇರುವಾಗ ಹೇಗೆ ಅವರನ್ನು ಡೆಪ್ಯುಟೇಷನ್ ಮೂಲಕ ಕಳುಹಿಸಲಾಗಿದೆಯೋ ಅರ್ಥವಾಗಿಲ್ಲ. ಇಲಾಖೆಯನ್ನು ಬಲಗೊಳಿಸಬೇಕಿದ್ದು, ಅವರನ್ನೆಲ್ಲ ವಾಪಸ್ ಕರೆಸಿಕೊಳ್ಳಲು ಪತ್ರ ಬರೆದಿದ್ದೇನೆ. ಇದಕ್ಕೆ ಮುಖ್ಯಮಂತ್ರಿಯವರೂ ಸಹಮತ ವ್ಯಕ್ತಪಡಿಸಿದ್ದಾರೆ.

। ಎಸ್.ಟಿ.ಸೋಮಶೇಖರ್ ಸಹಕಾರ ಸಚಿವ

**ಸಚಿವರಿಂದ ಸೂಚನೆ:** ಸಹಕಾರ ಇಲಾಖೆ ಹಾಗೂ ಲೆಕ್ಕ ಪರಿಶೋಧನಾ ಇಲಾಖೆಯಿಂದ ಉಪ ನಿಬಂಧಕರು, ಉಪ ನಿರ್ದೇಶಕರು, ಜಂಟಿ ನಿಬಂಧಕರು, ಜಂಟಿ ನಿರ್ದೇಶಕರು ಹಾಗೂ ಅಪರ ನಿಬಂಧಕರು, ಅಪರ ನಿರ್ದೇಶಕರು ಹಾಗೂ ಸಚಿವರ ಆಪ್ತ ಕಾರ್ಯದರ್ಶಿ.. ಹೀಗೆ ಹಲವಾರು ವರ್ಷಗಳಿಂದ ಇನ್ನಿತರ ಇಲಾಖೆಗಳಲ್ಲಿ ನಿಯೋಜನೆಗೊಂಡು ಕಾರ್ಯನಿರ್ವಹಿಸುತ್ತಿದ್ದಂಥವರನ್ನು ಕೂಡಲೇ ಮಾತೃ ಇಲಾಖೆಗೆ ಹಿಂದಿರುಗುವಂತೆ ಕ್ರಮ ಕೈಗೊಳ್ಳಬೇಕೆಂದು ಇಲಾಖೆಯ ಅಪರ ಮುಖ್ಯಕಾರ್ಯದರ್ಶಿಗೆ ಎಸ್.ಟಿ. ಸೋಮಶೇಖರ್ ಪತ್ರ ಬರೆದು ಸೂಚಿಸಿದ್ದಾರೆ.